ಕರ್ನಾಟಕ ಸರ್ಕಾರ
# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/56/ಅ.ಕಾ.ನಿ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-01, ದಿನಾಂಕ: 29.11.2022

## ಅಧಿಕೃತ ಜ್ಞಾಪನ

**ವಿಷಯ:** ಅನ್ಯಕಾರ್ಯ ನಿಮಿತ್ತ ಮಂಜೂರು ಮಾಡುವ ಕುರಿತು.

**ಉಲ್ಲೇಖ:**
1. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘ (ರಿ) ರಾಜ್ಯ ಘಟಕ ಬೆಂಗಳೂರು ಇವರ ಪತ್ರ ದಿನಾಂಕ : 24.11.2022.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳ ಟಿಪ್ಪಣಿ ಸಂಖ್ಯೆ: HrEdn.IT&BT.S&T.SD/PS/6490/2022-23 dt:24.11.2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಾ. ಹನುಮಂತಗೌಡ ಆರ್, ಕಲ್ಮನಿ, ರಾಜ್ಯಾಧ್ಯಕ್ಷರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅತಿಥಿ ಉಪನ್ಯಾಸಕರ ಸಂಘ, ಬೆಂಗಳೂರು, ಇವರು ದಿನಾಂಕ:30.11.2022 ರಂದು ಧಾರವಾಡದಲ್ಲಿ ರಾಜ್ಯ ಮಟ್ಟದ ಅತಿಥಿ ಉಪನ್ಯಾಸಕರ ಶೈಕ್ಷಣಿಕ ಸಮಾವೇಶ ಮತ್ತು ಅಭಿನಂದನಾ ಸಮಾರಂಭವನ್ನು ಆಯೋಜಿಸಲಾಗಿದ್ದು, ಸದರಿ ಅಭಿನಂದನಾ ಸಮಾರಂಭಕ್ಕೆ ಹಾಜರಾಗುವ ಎಲ್ಲಾ ಅತಿಥಿ ಉಪನ್ಯಾಸಕರಿಗೆ ಅನ್ಯಕಾರ್ಯನಿಮಿತ್ತ ಒಂದು ದಿನದ ರಜೆ ನೀಡುವಂತೆ ಉಲ್ಲೇಖಿತ 1 ರ ಪತ್ರದಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರನ್ನು ಕೋರಿದ್ದು, ಉಲ್ಲೇಖ 2 ರಲ್ಲಿ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ಈ ಬಗ್ಗೆ ಪರಿಶೀಲಿಸಿ ಮುಂದಿನ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿರುತ್ತಾರೆ.

ಈ ಸಂಬಂಧ, ಸದರಿ ಕಾರ್ಯಕ್ರಮಕ್ಕೆ ಹಾಜರಾಗುವ ರಾಜ್ಯದ ಎಲ್ಲಾ ಅತಿಥಿ ಉಪನ್ಯಾಸಕರುಗಳಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಒಪ್ಪಿಸುವ ನಿಬಂಧನೆಗೊಳಪಟ್ಟು ಸರ್ಕಾರದ / ಇಲಾಖೆಯ ವತಿಯಿಂದ ಯಾವುದೇ ಭತ್ಯೆಗಳಿಲ್ಲದೆ ಅನ್ಯಕಾರ್ಯ ನಿಮಿತ್ತ ಮಂಜೂರು ಮಾಡಲಾಗಿದೆ.

**(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ಕಾಲೇಜು ಶಿಕ್ಷಣ ನಿರ್ದೇಶಕರು**

**<u>ಇವರಿಗೆ:</u>**
1. ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಮಾಹಿತಿಗಾಗಿ)
2. ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳ ಅತಿಥಿ ಉಪನ್ಯಾಸಕರುಗಳಿಗೆ.
3. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.

**<u>ಪ್ರತಿಯನ್ನು:</u>**
1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಕೊಠಡಿ ಸಂಖ್ಯೆ:೨೪೨, ೨೪೩, ೨ನೇ ಮಹಡಿ, ವಿಕಾಸಸೌಧ, ಬೆಂಗಳೂರು-೫೬೦ ೦೦೧.
2. ಕಛೇರಿ ಪ್ರತಿ.